# <u>ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

## <u>ಸಿ.ಸಿ. 486/2018</u>

<u>ಸಾಕ್ಷಿದಾರರ ಹೇಳಿಕೆಃ</u>

| | | | |
|---|---|---|---|
| **ಹೆಸರು** | : | ಕೆ ವೈ ಬಸವನಗೌಡ | ಚಾಸಾಃ **12** ಪ್ರಾಸಾಃ **7** |
| **ತಂದೆಯ ಹೆಸರು** | : | ಯೋಗೇಂದ್ರಪ್ಪ ಕೆ ಎಸ್ | |
| **ವಯಸ್ಸು** | : | **25** ವರ್ಷ | |
| **ವೃತ್ತಿ** | : | ವ್ಯವಸಾಯ | |
| **ವಾಸಸ್ಥಳ** | : | ಯಲೋಧಹಳ್ಳಿ | |

ದಿನಾಂಕಃ **11-02-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ</u>

1 ನೇ ಆರೋಪಿ ಗೊತ್ತಿಲ್ಲ. ಚಾಸಾ-1 ಮತ್ತು ಮೃತ ಶ್ರೀನಿವಾಸ್ ಗೊತ್ತು. ಚಾಸಾ-13 ರಿಂದ 15 ಗೊತ್ತಿಲ್ಲ. ಈಗೇ ಸುಮಾರು 6 ವರ್ಷಗಳ ಹಿಂದೆ ನಾನು ಮತ್ತು ಮೃತ ಶ್ರೀನಿವಾಸ್ ಬೈಕ್ ನಲ್ಲಿ ಹೋಗುತ್ತಿರುವಾಗ ನಮಗೆ ಅಪಘಾತವಾಗಿರುತ್ತದೆ ಮತ್ತು ಅಪಘಾತದಿಂದಾಗಿ ನನಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು ಮತ್ತು ಶ್ರೀನಿವಾಸ್ ಅಪಘಾತದಿಂದಾದ ಗಾಯಗಳಿಂದ ತೀರಿಕೊಂಡಿದ್ದು ಆದರೆ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಯಿತು ಎಂಬ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲು:- ಮಾನ್ಯ ಸ.ಸ.ಅ. ರವರಿಂದ:-</u>

ದಿಃ 11-03-2018 ರಂದು ಮದ್ಯಾಹ್ನ 03-00 ಗಂಟೆ ಸಮಯದಲ್ಲಿ ಚಾಸಾ-17 ರವರಿಗೆ ಸೇರಿದ ಕೆಎ-02/ಇಪಿ-9607 ಮೋಟಾರ್ ಸೈಕಲ್ ನಲ್ಲಿ ಮೃತ ಶ್ರೀನಿವಾಸನನ್ನು ಕೂರಿಸಿಕೊಂಡು

ತಿಮ್ಲಾಪುರ ಗ್ರಾಮಕ್ಕೆ ಹೋಗಿ ಶ್ರೀನಿವಾಸರವರ ಸಂಬಂಧಿಕರವನ್ನು ಮಾತನಾಡಿಸಿಕೊಂಡು ಕುಂದೂರು ಆಂಜನೇಯ ದೇವಸ್ಥಾನಕ್ಕೆ ಹೋಗಿ ಪೂಜೆ ಮಾಡಿಸಿಕೊಂಡು ಬರುತ್ತಿರುವಾಗ ಹನುಮನಹಳ್ಳಿ ಬಸ್ ನಿಲ್ದಾಣದ ಕ್ರಾಸ್ ಹತ್ತಿರ ನಮ್ಮ ಮೋಟಾರ್ ಸೈಕಲ್ ಅನ್ನು ಕುಂದೂರು ಕಡೆ ತೆಗೆದುಕೊಳ್ಳುತ್ತಿದ್ದಾಗ ಕುಂದೂರು ಕಡೆಯಿಂದ ಹೊನ್ನಾಳಿ ಕಡೆಗೆ 1 ನೇ ಆರೋಪಿಯು ಕೆಎ-15/ಎ-1716 ಮಹಿಂದ್ರಾ ಬುಲೆರೋ ಪಿಕಪ್ ವಾಹನವನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೋಟಾರ್ ಸೈಕಲ್ ಗೆ ಡಿಕ್ಕಿಪಡಿಸಿದ ಪರಿಣಾಮ 2 ವಾಹನಗಳು ಜಕಂಗೊಂಡು ನನಗೆ ಮುಖ, ಕೈ ಕಾಲು ಮತ್ತು ಇತರ ಕಡೆ ಪೆಟ್ಟು ಬಿದ್ದಿದ್ದು ಶ್ರೀನಿವಾಸರವರಿಗೆ ತಲೆಯ ಹಿಂಭಾಗ, ಹಣೆ ಕೈ ಕಾಲು ಮತ್ತು ಇತರ ಕಡೆ ಪೆಟ್ಟು ಬಿದ್ದಿದ್ದು ಅಲ್ಲಿದ್ದ ಜನರು ನಮ್ಮನ್ನು ಉಪಚರಿಸಿ ಸಾರ್ವಜನಿಕ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತಾರೆ ಎಂದು ಮತ್ತು ಶ್ರೀನಿವಾಸನು ಮಾರ್ಗ ಮಧ್ಯದಲ್ಲೇ ಮೃತ ಪಟ್ಟಿರುತ್ತಾರೆ ಎಂದು ಮತ್ತು ನಾನು ಹೊನ್ನಾಳಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಂತರ ಶಿವಮೊಗ್ಗ ಸಹ್ಯಾದ್ರಿ ನಾರಾಯಣ ಹೃದಯಾಲಯದಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂದು ಮತ್ತು ಆರೋಪಿಯನ್ನು ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಪೊಲೀಸರಿಗೆ ನಿಪಿ-18 ರಂತೆ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.